ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

16

ಇಲಾಖೆ / ವಿಷಯ : DEPARTMENT / SUBJECT: ಬಿಡಿಎ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 25/1/20

# ಹೈಕೋರ್ಟ್ ಚಾಟಿ ಬಳಿಕ ವಿವಾದಾತ್ಮಕ ಸುತ್ತೋಲೆ ವಾಪಸ್

ವಿ.ಕ. 25/1/20

**ಬೆಂಗಳೂರು:** ಹೈಕೋರ್ಟ್ ಬೀಸಿದ ಚಾಟಿ ಏಟಿಗೆ ಎಚ್ಚೆತ್ತ ಬಿಡಿಎ ಆಯುಕ್ತರು, ತಮ್ಮ ಅನುಮತಿ ಇಲ್ಲದೆ ಯಾವುದೇ ತನಿಖಾ ಸಂಸ್ಥೆಗಳ ಎದುರು ಹಾಜರಾಗಬಾರದು, ಮಾಹಿತಿ ನೀಡಬಾರದು ಹಾಗೂ ದಾಖಲೆಗಳನ್ನು ಒದಗಿಸಬಾರದು ಎಂಬ ವಿವಾದಾತ್ಮಕ ಸುತ್ತೋಲೆಯನ್ನು ಹಿಂಪಡೆದಿದ್ದಾರೆ.



ಈ ಕುರಿತು ಹೈಕೋರ್ಟ್‌ಗೆ ಸ್ವತಃ ಬಿಡಿಎ ಆಯುಕ್ತ ಎಚ್.ಆರ್. ಮಹದೇವ ಅವರೇ ಪ್ರಮಾಣಪತ್ರ ಸಲ್ಲಿಸಿದ್ದಾರೆ. ಕಳೆದ ವಿಚಾರಣೆ ವೇಳೆ ನ್ಯಾಯಾಲಯ, ಆದೇಶವನ್ನು ಆಯುಕ್ತರು ಹಿಂಪಡೆಯದಿದ್ದರೆ ನ್ಯಾಯಾಲಯವೇ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿತ್ತು. ಹಾಗಾಗಿ, ಬಿಡಿಎ ಆಯುಕ್ತರು ತಾವು ಹೊರಡಿಸಿದ್ದ ಸುತ್ತೋಲೆ ಹಿಂಪಡೆದಿರುವುದಾಗಿ ಹೈಕೋರ್ಟ್‌ಗೆ ಮಾಹಿತಿ ನೀಡಿದ್ದಾರೆ.

ಎಸ್. ಅರುಣಾಚಲಂ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ವಿಚಾರಣೆ ನಡೆಸಿತು. ಬಿಡಿಎ ಆಯುಕ್ತರು ಜು.8ರಂದು ಆದೇಶ ಹೊರಡಿಸಿ, ತಮ್ಮ ಅನುಮತಿ ಇಲ್ಲದೆ ಯಾವುದೇ ತನಿಖಾ ಸಂಸ್ಥೆಗೆ ಮಾಹಿತಿ ಹಾಗೂ ದಾಖಲೆ ನೀಡಬಾರದು. ವಿಚಾರಣೆಗೆ ಹಾಜರಾಗಬಾರದು ಎಂದು ಸಿಬ್ಬಂದಿಗೆ ತಾಕೀತು ಮಾಡಿದ್ದರು. ಇದನ್ನು ಪ್ರಶ್ನಿಸಿದ್ದ ಅರ್ಜಿದಾರರು, ಬಿಡಿಎ ಆಯುಕ್ತರು ತಮ್ಮ ವ್ಯಾಪ್ತಿ ಮೀರಿ ಆದೇಶ ಹೊರಡಿಸಿದ್ದು, ಅದನ್ನು ರದ್ದುಗೊಳಿಸಬೇಕು ಎಂದು ಕೋರಿದ್ದರು.